**All India Radio: Bangalore**
**Regional Bulletin In Kannada**
**17.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.01.2026 / 2.30 p.m.**

**<><><><>**

ಮುಖ್ಯಾಂಶಗಳು

1. 'ವಂದೇ ಭಾರತ್ ಸ್ಲೀಪರ್' ರೈಲು ಸಂಚಾರಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ; ಅಮೃತ್ ಭಾರತ್ ಎಕ್ಸ್‌ಪ್ರೆಸ್, ಮೇಲ್ ಎಕ್ಸ್‌ಪ್ರೆಸ್‌ಗೂ ಹಸಿರು ನಿಶಾನೆ
2. ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆಗೆ ೫ ವರ್ಷಗಳಲ್ಲಿ ವಿಪ್ರೋ ಸಂಸ್ಥೆ ೪ ಸಾವಿರ ಕೋಟಿ ವೆಚ್ಚ ಮಾಡುವ ಗುರಿ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ಗಲಭೆ ಪ್ರಕರಣ ; ಬಳ್ಳಾರಿಯಲ್ಲಿಂದು ಬಿಜೆಪಿ ನಾಯಕರಿಂದ ಪ್ರತಿಭಟನೆ-ಸಿಬಿಐ ತನಿಖೆಗೆ ನೀಡುವಂತೆ ಆಗ್ರಹ
4. ಉಡುಪಿಯಲ್ಲಿ ಪರ್ಯಾಯ ಸಂಭ್ರಮ ; ಭಕ್ತರಿಂದ ಮಟ್ಟುಗುಳ್ಳ ಹೊರೆ ಕಾಣಿಕೆ ಸಮರ್ಪಣೆ
5. ಮಾಜಿ ಸಚಿವ ಶತಾಯುಷಿ ಭೀಮಣ್ಣ ಖಂಡ್ರೆ ನಿಧನ ; ಬೀದರ್‌ನಲ್ಲಿಂದು ಸಂಜೆ ಅಂತ್ಯಕ್ರಿಯೆ

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಪಶ್ಚಿಮ ಬಂಗಾಳದ ಮಾಲ್ಡಾ ನಗರ ರೈಲು ನಿಲ್ದಾಣದಲ್ಲಿ ಹೌರಾ ಮತ್ತು ಗುವಾಹಟಿಯ ಕಾಮಾಕ್ಯ ನಡುವಿನ ದೇಶದ ಮೊಟ್ಟಮೊದಲ 'ವಂದೇ ಭಾರತ್ ಸ್ಲೀಪರ್' ರೈಲು ಸಂಚಾರಕ್ಕೆ ಇಂದು ಹಸಿರು ನಿಶಾನೆ ತೋರಿದರು. ಈ ರೈಲು ಕಡಿಮೆ ದರದಲ್ಲಿ ಪ್ರಯಾಣಿಕರಿಗೆ ವಿಮಾನದಂತಹ ಪ್ರಯಾಣದ ಅನುಭವ ನೀಡಲಿದೆ. ವಂದೇ ಭಾರತ್ ಸ್ಲೀಪರ್ ರೈಲು ಒಟ್ಟು ೮೨೩ ಪ್ರಯಾಣಿಕರ ಸಾಮರ್ಥ್ಯವನ್ನು ಹೊಂದಿರುವ ೧೬ ಆಧುನಿಕ ಬೋಗಿಗಳನ್ನು ಒಳಗೊಂಡಿದೆ. ಇದೇ ವೇಳೆ ಅವರು ಅಲಿ ಪುರ್ದೂರ್ ಎಸ್‌ಎಂವಿಟಿ-ಬೆಂಗಳೂರು ಅಮೃತ್‌ಭಾರತ್ ಎಕ್ಸ್‌ಪ್ರೆಸ್, ಬಾಲೂರ್‌ಘಾಟ್ ಎಸ್‌ಎಂವಿಟಿ-ರಾಧಿಕಾಪುರ, ಎಸ್‌ಎಂವಿಟಿ-ಬೆಂಗಳೂರು ಮೇಲ್ ಎಕ್ಸ್‌ಪ್ರೆಸ್‌ಗೂ ಚಾಲನೆ ನೀಡಿದರು. ಈ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಉಪಸ್ಥಿತರಿದ್ದರು. ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಪ್ರಯಾಣ

ಸಮಯದಲ್ಲಿ ಗಮನಾರ್ಹ ಕಡಿತವಾಗಿದೆ. ಮೇಲ್ ಎಕ್ಸ್‌ಪ್ರೆಸ್ ರೈಲುಗಳ ಸುಸಜ್ಜಿತವಾದ ಆಧುನಿಕ ಸೌಕರ್ಯಗಳು ಪ್ರವಾಸೋದ್ಯಮ ಮತ್ತು ಸ್ಥಳೀಯ ಆರ್ಥಿಕತೆಗೆ ಉತ್ತೇಜನ ನೀಡಲಿದೆ.

ಧ್ವನಿ : ಪ್ರಧಾನಿ ನರೇಂದ್ರ ಮೋದಿ

<><><><>

ಸಾವಿರ ಹಾಸಿಗೆಗಳ ಚಾರಿಟೆಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆಗೆ ಅಜೀಂ ಪ್ರೇಮ್ ಜಿ ಪ್ರತಿಷ್ಠಾನ ಐದು ವರ್ಷಗಳಲ್ಲಿ ೪ ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡುವ ಗುರಿ ಹೊಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನ ಸೌಧದಲ್ಲಿಂದು ಸಾವಿರ ಹಾಸಿಗೆಗಳ ಚಾರಿಟಬಲ್ ಸೂಪರ್ ಸ್ಪೆಷಾಲಿಟಿ ಹಾಗೂ ಮಾನವ ಬಹು ಅಂಗಾಂಗ ಕಸಿ ಆಸ್ಪತ್ರೆ ನಿರ್ಮಾಣ ಮತ್ತು ನಿರ್ವಹಣೆ ಕುರಿತು ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಅಜೀಂ ಪ್ರೇಮ್ ಜಿ ಪ್ರತಿಷ್ಠಾನದ ನಡುವೆ ಒಡಂಬಡಿಕೆಗೆ ಮುಖ್ಯಮಂತ್ರಿ ಸಹಿ ಹಾಕಿದರು. ಬಳಿಕ ಮಾತನಾಡಿದ ಅವರು, ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆ ಆವರಣದಲ್ಲಿ ಸರ್ಕಾರ ೧೦ ಎಕರೆ ಸ್ಥಳವನ್ನು ೯೯ ವರ್ಷಗಳ ಅವಧಿಗೆ  ಗುತ್ತಿಗೆ ಆಧಾರದ ಮೇಲೆ ನೀಡಲು ಒಪ್ಪಂದವಾಗಿದೆ ಎಂದು ಹೇಳಿದ್ದಾರೆ. ಅಜೀಂ ಪ್ರೇಮ್ ಜಿ ಅವರ ಈ ಮಹತ್ಕಾರ್ಯಕ್ಕೆ  ಸರ್ಕಾರ ಆಭಾರಿಯಾಗಿದೆ. ಈ ಪ್ರತಿಷ್ಠಾನವು ಕಳೆದ ೨೫ ವರ್ಷಗಳಿಂದ ಶಿಕ್ಷಣ ಮತ್ತು  ಆರೋಗ್ಯ ಕ್ಷೇತ್ರದಲ್ಲಿ ದೊಡ್ಡ ಪ್ರಮಾಣದಲ್ಲಿ ಸೇವೆ ಸಲ್ಲಿಸುತ್ತಿದೆ ಎಂದು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಧ್ವನಿ : ಸಿದ್ದರಾಮಯ್ಯ

<><><><>

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ದಾವೋಸ್ ಪ್ರವಾಸವನ್ನು ರದ್ದುಗೊಳಿಸಲಾಗಿದೆ. ಬೆಂಗಳೂರು ಹಾಗೂ ನವದೆಹಲಿಯಲ್ಲಿ ಅಧಿಕೃತ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಇದೇ ೧ಲರಂದು ದಾವೋಸ್‌ನಲ್ಲಿ ನಿಗದಿಯಾಗಿದ್ದ ವರ್ಲ್ಡ್ ಏಕನಾಮಿಕ್ ಫೋರಂ ಕಾರ್ಯಕ್ರಮದಲ್ಲಿ ಭಾಗವಹಿಸುವುದಿಲ್ಲ ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಎಐಸಿಸಿ ನಾಯಕರ ಜೊತೆಗಿನ ಸರಣಿ ಸಭೆ ಹಾಗೂ ಮನ್ರೇಗಾ ಮರುಜಾರಿ ಆಗ್ರಹಿಸಿ ಕೇಂದ್ರ ಸರ್ಕಾರದ ವಿರುದ್ಧದ ಅಭಿಯಾನದ ಜೊತೆಗೆ ಇದೇ ೨೨ರಿಂದ ಆರಂಭವಾಗುವ ಐದು ದಿನಗಳ ವಿಶೇಷ ಅಧಿವೇಶನದಲ್ಲಿ ಭಾಗವಹಿಸುತ್ತಿರುವುದಾಗಿ ಅವರು ಸ್ಪಷ್ಟಪಡಿಸಿದ್ದಾರೆ.

<><><><>

ಬಳ್ಳಾರಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತನ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ನಾ.ರಾ.ಭರತ್ ರೆಡ್ಡಿ ಅವರನ್ನು ಬಂಧಿಸಬೇಕು. ಪ್ರಕರಣವನ್ನು ಕೇಂದ್ರ ತನಿಖಾ ದಳ - ಸಿಬಿಐಗೆ ಹಸ್ತಾಂತರಿಸಬೇಕೆಂದು ಬಿಜೆಪಿ ಪ್ರತಿಭಟನೆ ನಡೆಸಿತು. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕಾಂಗ್ರೆಸ್ ಸರ್ಕಾರ ಹಿಂದುಳಿದ ವರ್ಗಗಳ ವಿರೋಧಿಯಾಗಿದೆ. ಪೊಲೀಸ್ ಠಾಣೆಗಳು ಕಾಂಗ್ರೆಸ್ ಪಕ್ಷದ ಕಚೇರಿಗಳಾಗಿವೆ ಎಂದು ದೂರಿದ್ದಾರೆ. ಪ್ರತಿಭಟನಾ ಸಮಾವೇಶಕ್ಕೂ ಮುನ್ನ ಮಾತನಾಡಿದ ವಿಪಕ್ಷ ನಾಯಕ ಆರ್. ಅಶೋಕ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಆರೋಪಿಸಿದ್ದು, ಬಳ್ಳಾರಿ ಗಲಭೆ ಪ್ರಕರಣವನ್ನು ಸಿಬಿಐಗೆ ನೀಡುವಂತೆ ಆಗ್ರಹಿಸಿದ್ದಾರೆ. ಮಾಜಿ ಸಚಿವ ಗೋವಿಂದ ಕಾರಜೋಳ ಮಾತನಾಡಿ, ರಾಜ್ಯ ಸರ್ಕಾರದ ದುರಾಡಳಿತಕ್ಕೆ ಜನರು ಬೇಸತ್ತಿದ್ದಾರೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಬಳ್ಳಾರಿಯಲ್ಲಿ ಬಿಗಿಭದ್ರತೆ ಕೈಗೊಳ್ಳಲಾಗಿದೆ.

<><><>

ಉಡುಪಿಯ ಶೀರೂರು ಮಠಾಧೀಶ ವೇದವರ್ಧನ ತೀರ್ಥರ ಪ್ರಥಮ ಪರ್ಯಾಯಕ್ಕೆ ಮಟ್ಟು ಭಾಗದ ಭಕ್ತರು ಇಂದು ಮಟ್ಟುಗುಳ್ಳ ಬದನೆ ಹೊರೆಕಾಣಿಕೆ ಸಮರ್ಪಿಸಿದ್ದಾರೆ. ಮಟ್ಟು ಗುಳ್ಳ ಬದನೆ ತುಂಬಿದ ಬುಟ್ಟಿಯನ್ನು ಹೊತ್ತ ಭಕ್ತರು ಮೆರವಣಿಗೆ ಮೂಲಕ ರಥಬೀದಿಗೆ ಬಂದು ಹೊರೆಕಾಣಿಕೆ ಸಮರ್ಪಿಸಿದ್ದಾರೆ. ಉಡುಪಿಯ ಕೃಷ್ಣ ಮಠ ಮತ್ತು ಮಟ್ಟುಗುಳ್ಳಕ್ಕೆ ವಿಶೇಷ ಸಂಬಂಧವಿದೆ. ವಾದಿರಾಜ ಸ್ವಾಮಿಗಳು ಅನುಗ್ರಹಿಸಿ ನೀಡಿದ ಬೀಜದಿಂದ ಹುಟ್ಟಿಕೊಂಡ ಗುಳ್ಳ ಇಂದಿಗೂ ದೇಶದಲ್ಲೇ ಜಿಐ ಪೇಟೆಂಟ್ ಪಡೆದ ಮೊದಲ ತರಕಾರಿ ಎಂಬ ಖ್ಯಾತಿ ಪಡೆದಿದೆ. ಜೊತೆಗೆ ಕೃಷ್ಣ ಮಠದ ನಿತ್ಯ ಬಳಕೆಯ ತರಕಾರಿಗಳಲ್ಲಿ ಗುಳ್ಳ ತರಕಾರಿಗೆ ವಿಶೇಷ ಸ್ಥಾನವಿದೆ.

<><><>

ಸರ್ಕಾರಿ ನೌಕರರು ದೈಹಿಕವಾಗಿ ಸದೃಢರಾಗಬೇಕು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಕರೆ ನೀಡಿದ್ದಾರೆ. ಮಂಡ್ಯ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ನೌಕರರು ದೈಹಿಕವಾಗಿ ದೃಢತೆಯನ್ನು ಕಾಪಾಡಿಕೊಳ್ಳುವುದರಿಂದ ಮಾನಸಿಕ ಒತ್ತಡ ನಿವಾರಣೆಯಾಗುತ್ತದೆ ಎಂದು ತಿಳಿಸಿದ್ದಾರೆ.

<><><>

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಮಾಜಿ ಅಧ್ಯಕ್ಷರು, ಶತಾಯುಷಿ ಶ್ರೀ ಭೀಮಣ್ಣ ಖಂಡ್ರೆ ವಯೋಸಹಜ ಅನಾರೋಗ್ಯದಿಂದ ಬೀದರ್ ಜಿಲ್ಲೆ ಭಾಲ್ಕಿಯ ಸ್ವಗೃಹದಲ್ಲಿ ನಿಧನ ಹೊಂದಿದ್ದಾರೆ. ಇಂದು ಸಂಜೆ ೫ ಗಂಟೆಗೆ ಭಾಲ್ಕಿ ಬಳಿಯ ಚಿಕಲಚಂದಾ ಗ್ರಾಮದ ಬಳಿಯ ಅವರ ತೋಟ ಶಾಂತಿಧಾಮದಲ್ಲಿ ಅಂತ್ಯಕ್ರಿಯೆ ನಡೆಯಲಿದೆ. ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅಂತಿಮ ದರ್ಶನ ಪಡೆಯಲಿದ್ದಾರೆ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ನಾಲ್ಕು ಬಾರಿ ಶಾಸಕರಾಗಿ, ಎರಡು ಸಲ ವಿಧಾನ ಪರಿ?ತ್ ಸದಸ್ಯರಾಗಿದ್ದ ಭೀಮಣ್ಣ ಖಂಡ್ರೆ ಅವರು ವೀರಪ್ಪ ಮೊಯ್ಲಿ ಅವರ ಸಂಪುಟದಲ್ಲಿ ಸಾರಿಗೆ ಸಚಿವರಾಗಿ ಕೆಲಸ ನಿರ್ವಹಿಸಿದ್ದರು.

<><><>

ಕರಾವಳಿ ಉತ್ಸವದ ಅಂಗವಾಗಿ ಇಂದಿನಿಂದ ಮಂಗಳೂರಿನ ತಣ್ಣೀರು ಬಾವಿ ಬೀಚ್‌ಲ್ಲಿ ಒಂಭತ್ತನೇ ಆವೃತ್ತಿಯ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ. ೧೫ ದೇಶಗಳ ೩೦ ಅಂತಾರಾಷ್ಟ್ರೀಯ ಗಾಳಿಪಟುಗಳು ಈ ಗಾಳಿಪಟ ಉತ್ಸವದಲ್ಲಿ ಭಾಗವಹಿಸುತ್ತಿದ್ದಾರೆ. ಭಾರತ ಮತ್ತು ವಿದೇಶಗಳಿಂದ ಸೇರಿ ಒಟ್ಟು ೬೨ ನುರಿತ ಗಾಳಿಪಟ ಹಾರಾಟಗಾರರು ತಮ್ಮ ವೈವಿಧ್ಯಮಯ ಗಾಳಿಪಟಗಳನ್ನು ಬಾನಂಗಳದಲ್ಲಿ ಹಾರಿಸಲಿದ್ದಾರೆ. ಉತ್ಸವದಲ್ಲಿ ಸಾಂಪ್ರದಾಯಿಕ, ಏರೋಫಾಯಿಲ್, ಇನ್‌ಫ್ಲೇಟಬಲ್ ಹಾಗೂ ಕ್ವಾಡ್ ಲೈನ್ ಸ್ಪೋರ್ಟ್ ಗಾಳಿಪಟಗಳ ಪ್ರದರ್ಶನ ಇರಲಿದೆ. ಗಾಳಿಪಟ ಉತ್ಸವವನ್ನು ಆಯೋಜಿಸುತ್ತಿರುವ ಟೀಮ್ ಮಂಗಳೂರು ತಂಡದಿಂದ ಸಾಂಸ್ಕೃತಿಕ ಗಾಳಿಪಟಗಳ ಜತೆಗೆ ವಿಶೇಷವಾಗಿ ತುಳುನಾಡಿನ ಸಾಂಸ್ಕೃತಿಕ ವೈಭವ ಪ್ರತಿಬಿಂಬಿಸುವ ರಥ ಎಂಬ ಹೊಸ ಗಾಳಿಪಟವನ್ನು ಪರಿಚಯಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಆಯುಷ್ ಪದ್ಧತಿಗಳನ್ನು ಆರೋಗ್ಯ ಕ್ಷೇತ್ರದ ಮುಖ್ಯವಾಹಿನಿಗೆ ತರುವಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದಾರೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಶ್ಲಾಘಿಸಿದ್ದಾರೆ. ಇದೇ ೩೧ ಮತ್ತು ಫೆಬ್ರವರಿ ೧ರಂದು ಮಂಗಳೂರು ನಗರದ ಡಾ.ಟಿಎಂಎ ಪೈ ಇಂಟರ್ ನ್ಯಾಷನಲ್ ಕನ್ವೆನ್ಯನ್ ಸೆಂಟರ್ ನಲ್ಲಿ ನಡೆಯಲಿರುವ ಭಾರತೀಯ ವೈದ್ಯ ಪದ್ಧತಿಗಳ ಮಹಾ ಸಂಭ್ರಮ- ಆಯುಷ್ ಹಬ್ಬ ಕುರಿತ ಪ್ರಚಾರ

ಅಭಿಯಾನದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಆಯುಷ್ ವೈದ್ಯ ಪದ್ಧತಿ ಇನ್ನಷ್ಟು ಪ್ರಚಾರವಾಗಬೇಕು. ನಮ್ಮ ವೈದ್ಯ ಪದ್ಧತಿಯನ್ನು ನಾವು ಮರೆಯಬಾರದು ಎಂದು ತಿಳಿಸಿದ್ದಾರೆ. ಆಯುಷ್ ಹಬ್ಬ ಕಾರ್ಯಕ್ರಮದಲ್ಲಿ ಹೃದಯದ ಆರೋಗ್ಯ ರಕ್ಷಣೆಗಾಗಿ ಆದ್ಯತೆ ನೀಡಲಾಗಿದೆ. ಆಯುಷ್ ವೈದ್ಯ ಪದ್ಧತಿಗಳ ಆಹಾರ, ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಮೊದಲಾದ ಸರಳ ವಿಧಾನಗಳ ಮೂಲಕ ರೋಗ ಬರದಂತೆ ತಡೆಯುವ ಕ್ರಮದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

<><><>

ಗ್ರಾಮ ಪಂಚಾಯತ್ ಸೇರಿದಂತೆ ಜಿಲ್ಲೆಯ ಸಮಗ್ರ ಅಭಿವೃದ್ಧಿ ಕುರಿತು ಯೋಜನೆ ರೂಪಿಸುವಾಗ ಸಾರ್ವಜನಿಕರ ಅಪೇಕ್ಷೆಗಳನ್ನು ಸೇರ್ಪಡೆಗೊಳಿಸಿ, ಸಮಗ್ರ ಯೋಜನೆ ಸಿದ್ಧಪಡಿಸುವಂತೆ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>